# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001

ದೂ:+91-80-2226 0017;+91-80-2226 7470;+91-80-2226 1047 ಮಿಂಚಂಚೆ: info@bsgkarnataka.org ಅಂತರ್ಜಾಲ: www.bsgkarnataka.in

ಸಂಖ್ಯೆ:SHQ/ORG-1/Rajy S-G-Ro-Ra T.C/133/2025-26 12009 ದಿನಾಂಕ:13.01.2026

ಜಿಲ್ಲಾ ಕಾರ್ಯದರ್ಶಿಗಳಿಗೆ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
ಜಿಲ್ಲಾ ಸಂಸ್ಥೆ, ------------------- ಜಿಲ್ಲೆ

ಮಾನ್ಯರೆ,

ವಿಷಯ:- 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ರೋವರ್ಸ್-ರೇಂಜರ್ಸ್‌ಗಳನ್ನು ರಾಜ್ಯ ಮಟ್ಟದ ರಾಜ್ಯ ಪುರಸ್ಕಾರ ಪರೀಕ್ಷಾ ಶಿಬಿರಕ್ಕೆ ನಿಯೋಜಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ರೋವರ್ಸ್, ರೇಂಜರ್ಸ್‌ಗಳಿಗೆ ರಾಜ್ಯ ಮಟ್ಟದ ರಾಜ್ಯಪುರಸ್ಕಾರ ಪರೀಕ್ಷಾ ಶಿಬಿರವನ್ನು ಏರ್ಪಡಿಸಲಾಗಿದೆ. ವಿವರಗಳು ಈ ಕೆಳಕಂಡಂತಿದೆ.

| | |
|---|---|
| ಶಿಬಿರ | ರೋವರ್ಸ್, ರೇಂಜರ್ಸ್‌ಗಳಿಗೆ ರಾಜ್ಯ ಮಟ್ಟದ ರಾಜ್ಯಪುರಸ್ಕಾರ ಪರೀಕ್ಷಾ ಶಿಬಿರ |
| ಸ್ಥಳ | ಕೊಂಡಜ್ಜಿ ಬಸಪ್ಪ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ |
| ದಿನಾಂಕ | 10.02.2026 ರಿಂದ 12.02.2026ರ ವರೆಗೆ (3 ದಿನಗಳು) |
| ವರದಿ ಮಾಡುವ ದಿನಾಂಕ | 10.02.2026 ರಂದು ಸಂಜೆ 4.00 ಗಂಟೆಗೆ (ತಡವಾಗಿ ಬಂದವರನ್ನು ಸೇರಿಸಲಾಗುವುದಿಲ್ಲ) |
| ಬಿಡುಗಡೆ ದಿನಾಂಕ | 12.02.2026ರಂದು ಸಂಜೆ 5.00 ಗಂಟೆಗೆ |
| ಊಟ ಹಾಗೂ ವಸತಿ | ರಾಜ್ಯ ಸಂಸ್ಥೆಯಿಂದ ವ್ಯವಸ್ಥೆ ಮಾಡಲಾಗಿದೆ |
| ನೊಂದಣಿ ಶುಲ್ಕ | ಪ್ರತಿಯೊಬ್ಬರಿಗೆ ರೂ.350/- |
| ಯಾರು ಭಾಗವಹಿಸುವುದು | ರಾಜ್ಯ ಸಂಸ್ಥೆಯಿಂದ ಆನ್‌ಲೈನ್ ಲಿಖಿತ ಪರೀಕ್ಷೆಯಲ್ಲಿ ಭಾಗವಹಿಸಿರುವ ಹಾಗೂ ರಾಜ್ಯಪುರಸ್ಕಾರ ಪೂರ್ವ ಸಿದ್ಧತಾ ಪರೀಕ್ಷಾ ಶಿಬಿರದಲ್ಲಿ ಭಾಗವಹಿಸಿರುವ ಅರ್ಹ ರೋವರ್ಸ್ & ರೇಂಜರ್ಸ್‌ಗಳಿಗೆ ಮಾತ್ರ ಅವಕಾಶವಿರುವುದು. ರೋವರ್ಸ್-ರೇಂಜರ್ಸ್‌ಗಳ ಪಟ್ಟಿಯನ್ನು ರಾಜ್ಯ ಸಂಸ್ಥೆಯಿಂದ ಕಳುಹಿಸಲಾಗುವುದು. |
| ಭಾಗವಹಿಸುವ ಜಿಲ್ಲೆಗಳು | **ಬಾಗಲಕೋಟೆ, ಬೆಳಗಾವಿ, ದಾವಣಗೆರೆ, ಬಳ್ಳಾರಿ, ಚಿತ್ರದುರ್ಗ, ದಕ್ಷಿಣ ಕನ್ನಡ, ಧಾರವಾಡ, ಗದಗ, ಹಾಸನ, ಹಾವೇರಿ, ಕೊಡಗು, ಶಿವಮೊಗ್ಗ, ಶಿರಸಿ, ಉಡುಪಿ, ವಿಜಯನಗರ ಜಿಲ್ಲೆಗಳ ರೋವರ್ಸ್ ಮತ್ತು ರೇಂಜರ್ಸ್‌ಗಳು ಮಾತ್ರ ಭಾಗವಹಿಸುವುದು.** |
| ಗಮನಿಸಿ | * ಸಮವಸ್ತ್ರ ಪೂರ್ಣವಾಗಿರಬೇಕು. ಪ್ರಾವೀಣ್ಯತಾ ಪದಕ ಧರಿಸಿರಬೇಕು. (ರೇಂಜರ್ಸ್‌ಗಳಿಗೆ ಸ್ಯಾಷ್ ಕಡ್ಡಾಯ) ಲಾಗ್ ಬುಕ್ ಸಂಪೂರ್ಣಗೊಂಡಿರ-ಬೇಕು ಮತ್ತು ಪದಕ ಪರೀಕ್ಷಕರಿಂದ ಸಹಿ & ಪ್ರಮಾಣ ಪತ್ರ ಪಡೆದಿರಬೇಕು. |

| | |
|---|---|
| | * ಪರೀಕ್ಷಾ ಶಿಬಿರದಲ್ಲಿ ಭಾಗವಹಿಸುವ ರೋವರ್ಸ್/ರೇಂಜರ್ಸ್‌ಗಳೊಂದಿಗೆ ರೋವರ್ ಸ್ಕೌಟ್ ಲೀಡರ್ಸ್/ರೇಂಜರ್ ಲೀಡರ್ಸ್‌ಗಳು ಕಡ್ಡಾಯವಾಗಿ ಭಾಗವಹಿಸಬೇಕು.<br>* ಒಂದು ಘಟಕದಿಂದ 12ಕ್ಕಿಂತಲೂ ಹೆಚ್ಚು ರೋವರ್ಸ್/ರೇಂಜರ್ಸ್‌ಗಳನ್ನು ಪರೀಕ್ಷಾ ಶಿಬಿರಕ್ಕೆ ಅನುಮತಿಸಲಾಗುವುದಿಲ್ಲ. |
| ತರಬೇಕಾದ ವಸ್ತುಗಳು | ಸಮವಸ್ತ್ರ, ಬದಲಿ ಉಡುಪು, ಹಗುರ ಹಾಸಿಗೆ, ಹೊದಿಕೆ, ತಟ್ಟೆ ಲೋಟ, ಸಂಪೂರ್ಣಗೊಂಡ ಲಾಗ್ ಬುಕ್, ಹಗ್ಗ, ಸ್ಟೇವ್ಸ್, ಕಲರ್ ಪೆನ್ಸಿಲ್ಸ್, ಸ್ಕೆಚ್‌ಪೆನ್ಸ್ ಹಾಗೂ ಪರೀಕ್ಷೆಗೆ ಅವಶ್ಯವಿರುವ ಇತರೆ ವಸ್ತುಗಳು. ಪ್ರಾವೀಣ್ಯತಾ ಪ್ರಮಾಣ ಪತ್ರಗಳು ಮತ್ತು ಪದಕ ಇತ್ಯಾದಿ ಸಾಮಗ್ರಿಗಳನ್ನು ಕಡ್ಡಾಯವಾಗಿ ತರಬೇಕು. |

ಸಹಾಯಕ ರಾಜ್ಯ ಸಂಘಟನಾ ಆಯುಕ್ತರು/ಜಿಲ್ಲಾ ಸಂಘಟಕರುಗಳು/ಸ್ಕೌಟ್-ಗೈಡ್ ಸ್ವಯಂ ಸೇವಕರು/ಸ್ಕೌಟ್-ಗೈಡ್ ಸಹಾಯಕರುಗಳು ರೋವರ್ಸ್-ರೇಂಜರ್ಸ್‌ಗಳನ್ನು ಪರೀಕ್ಷಾ ಶಿಬಿರಕ್ಕೆ ನಿಯೋಜಿಸುವ ಮುನ್ನ ಮೇಲ್ಕಂಡ ನಿಭಂದನೆಗಳನ್ನು ಪರಿಶೀಲಿಸಿ, ಅರ್ಹರಿರುವ ರೋವರ್ಸ್/ರೇಂಜರ್ಸ್‌ಗಳನ್ನು ಮಾತ್ರ ರಾಜ್ಯ ಪುರಸ್ಕಾರ ಪರೀಕ್ಷಾ ಶಿಬಿರಕ್ಕೆ ನಿಯೋಜಿಸಲು ಕೋರಲಾಗಿದೆ. ತಮ್ಮ ಜಿಲ್ಲೆಯಿಂದ ಭಾಗವಹಿಸುವ ರೋವರ್ಸ್/ರೇಂಜರ್ಸ್‌ಗಳು ಭಾಗವಹಿಸುವ ಬಗ್ಗೆ ರಾಜ್ಯ ಸಂಸ್ಥೆಗೆ ದಿನಾಂಕ:05.02.2026ರ ರೊಳಗೆ ತಿಳಿಸುವುದು. ಕೂಡಲೆ ಕ್ರಮ ವಹಿಸಲು ತಿಳಿಸಲಾಗಿದೆ.

ಸ್ಕೌಟ್ಸ್-ಗೈಡ್ಸ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

ರಾಜ್ಯ ಮುಖ್ಯ ಆಯುಕ್ತರಿಂದ
ಅನುಮೋದಿಸಲ್ಪಟ್ಟಿದೆ

(ಕೆ. ಗಂಗಪ್ಪಗೌಡ)
ರಾಜ್ಯ ಕಾರ್ಯದರ್ಶಿ

ಪ್ರತಿಯನ್ನು ಮಾಹಿತಿಗಾಗಿ:

1. ಜಿಲ್ಲಾ ಮುಖ್ಯ ಆಯುಕ್ತರು, ಭಾ.ಸ್ಕೌ&ಗೈ
2. ಜಿಲ್ಲಾ ಆಯುಕ್ತರು (ಸ್ಕೌ/ಗೈ), ಭಾ.ಸ್ಕೌ&ಗೈ
3. ರಾಜ್ಯದ ಎಲ್ಲಾ ಸಹಾಯಕ ರಾಜ್ಯ ಸಂಘಟನಾ/ಜಿಲ್ಲಾ ಸಂಘಟಕರು/ಸ್ಕೌಟ್-ಗೈಡ್ ಸ್ವಯಂ ಸೇವಕರು/ಸ್ಕೌಟ್-ಗೈಡ್ ಸಹಾಯಕರುಗಳಿಗೆ
4. ಶಿಬಿರದ ನಾಯಕರು/ಸಹನಾಯಕರು/ಪರೀಕ್ಷಕರುಗಳಿಗೆ
5. ಸಂಬಂಧಪಟ್ಟ ತರಬೇತಿ ಶಿಬಿರ ಕೇಂದ್ರಕ್ಕೆ
6. ಲೆಕ್ಕ ವಿಭಾಗ
7. ಕಛೇರಿ ಪ್ರತಿ



35